# ಸಹಾಯಕ ಆಯುಕ್ತರವರ ನ್ಯಾಯಾಲಯ, ಹೊಸಪೇಟೆ

ಎ.ವಿಲೇ.ನಂ.ಕಂ.ಪಹಣಿ.ಅಪೀಲು:202/2011-12 ದಿನಾಂಕ:07.06.2016.

**ಉಪಸ್ಥಿತರು: ಅವಿನಾಶ್ ಮೆನನ್ ರಾಜೇಂದ್ರನ್, ಭಾ.ಆ.ಸೇ**
**ಸಹಾಯಕ ಆಯುಕ್ತರು, ಹೊಸಪೇಟೆ**

**ವಾದಿಗಳು: ಶ್ರೀ/ ಶ್ರೀಮತಿ**

1. ರಣದಪ್ಪನವರ ಪಕ್ಕೀರಮ್ಮ ತಂದೆ ರಣದಪ್ಪನವರ ಸಣ್ಣ ಹನುಮಪ್ಪ, **ವಾಸ:** ಹೊಳಲು ಗ್ರಾಮ, ಕೂಡ್ಲಿಗಿ ತಾಲೂಕು, ಬಳ್ಳಾರಿ ಜಿಲ್ಲೆ.

[ಶ್ರೀ ಎಂ.ಕಾಳಿದಾಸ, ವಕೀಲರು, ಹೊಸಪೇಟೆ.]

**ಪ್ರತಿವಾದಿಗಳು: ಶ್ರೀ/ ಶ್ರೀಮತಿ**

1. ರಣದಪ್ಪನವರ ದೊಡ್ಡ ಹನುಮಪ್ಪ ತಂದೆ ಲೇಟ್ ರಣದಪ್ಪ, **ವಾಸ:** ಹೊಳಲು ಗ್ರಾಮ, ಹಡಗಲಿ ತಾಲೂಕು, ಬಳ್ಳಾರಿ ಜಿಲ್ಲೆ.
[ ಶ್ರೀ ಎ.ಗುರುಬಸಪ್ಪ, ವಕೀಲರು, ಹೊಸಪೇಟೆ ]
2. ತಹಶೀಲ್ದಾರರು, ಹಡಗಲಿ,
3. ಕಂದಾಯ ನಿರೀಕ್ಷಕರು, ಹಿರೇಹಡಗಲಿ.

********

**ವ್ಯಾಜ್ಯದ ಜಮೀನು:**

| ತಾಲೂಕು | ಹೋಬಳಿ | ಗ್ರಾಮ | ಸ.ನಂ. | ವಿಸ್ತೀರ್ಣ |
|---|---|---|---|---|
| ಹಡಗಲಿ | ಹಿರೇಹಡಗಲಿ | ಹೊಳಲು | 617/ಎಲ್/ಆ | 00 ಎಕರೆ 32 ಸೆಂಟ್ಸ್ |

**ಪೀಠಿಕೆ:**

ಹಡಗಲಿ ತಾಲೂಕು ಹಿರೇಹಡಗಲಿ ಹೋಬಳಿ ಹೊಳಲು ಗ್ರಾಮದ ಸ.ನಂ.617/ಎಲ್/ಆ ವಿಸ್ತೀರ್ಣ:00 ಎಕರೆ 32 ಸೆಂಟ್ಸ್; ವಿವಾದಾಸ್ಪದ ಜಮೀನಿಗೆ ಸಂಬಂಧಿಸಿದಂತೆ ಕಂದಾಯ ನಿರೀಕ್ಷಕರು, ಹಿರೇಹಡಗಲಿ ಇವರ ಹಕ್ಕು ಬದಲಾವಣೆ ಆದೇಶ ಸಂಖ್ಯೆ:ಎಂ.ಆರ್.ನಂ.:ಹೆಚ್.108/2011-12 ದಿನಾಂಕ:16.12.2011 ವನ್ನು ಪ್ರಶ್ನಿಸಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136[2] ರಡಿಯಲ್ಲಿ ಮೇಲ್ಮನವಿಯನ್ನು ವಾದಿಪರ ವಕೀಲರು ದಿನಾಂಕ:28.01.2012 ರಂದು ಸಲ್ಲಿಸಿರುತ್ತಾರೆ.

ವಾದಿಗಳ ಪರ ವಕೀಲರು ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಿ, ನೈಸರ್ಗಿಕ ನ್ಯಾಯದ ಹಿತದೃಷ್ಟಿಯಿಂದ ಪ್ರಕರಣದ ವಿಚಾರಣೆಯನ್ನು ದಿನಾಂಕ:06.03.2012 ಕ್ಕೆ ನಿಗದಿಪಡಿಸಿ ಉಭಯಪಕ್ಷಗಳಿಗೆ ನೋಟೀಸು ಜಾರಿಗೊಳಿಸಿ ವಿಚಾರಣೆಯನ್ನು ಪ್ರಾರಂಭಿಸಲಾಯಿತು.

ಆದರೆ, ವಿಚಾರಣೆ ಪ್ರಾರಂಭಿಸಿದಾಗಿನಿಂದ ಉಭಯ ಪಕ್ಷಗಾರರು ಸತತವಾಗಿ ಗೈರುಹಾಜರಾಗಿದ್ದು, ಪ್ರಕರಣದಲ್ಲಿ ಆಸಕ್ತಿ ಇಲ್ಲದೇ ಇರುವುದು ಕಂಡುಬಂದಿರುತ್ತದೆ. ಆದುದರಿಂದ, ಪ್ರಕರಣವನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲು ಈ ಕೆಳಕಂಡಂತೆ

## -:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಉಭಯ ಪಕ್ಷಗಾರರು ಸತತವಾಗಿ ಗೈರುಹಾಜರಾಗಿರುವುದರಿಂದ, ಸದರಿ ಅಪೀಲನ್ನು ಇದೇ ಹಂತದಲ್ಲಿ ಮುಕ್ತಾಯಗೊಳಿಸಲಾಗಿದೆ. (dismissed for default).

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:07.06.2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಿದೆ.

[ಅವಿನಾಶ್ ಮೆನನ್ ರಾಜೇಂದ್ರನ್, ಭಾ.ಆ.ಸೇ]
ಸಹಾಯಕ ಆಯುಕ್ತರು,
ಹೊಸಪೇಟೆ.

ವಾದಿ : ಪ್ರತಿವಾದಿಗಳಿಗೆ

**ಪ್ರತಿಯನ್ನು:** ತಹಶೀಲ್ದಾರರು, ಹಡಗಲಿ ಇವರಿಗೆ ಸಂಬಂಧಿಸಿದ ಮೂಲ ಕಡತದೊಂದಿಗೆ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.